# ಸ್ವರ್ಣವಲ್ಲಿ ಸ್ವಾಮೀಜಿ ಶಿಷ್ಯ ಸ್ವೀಕಾರ

ಶಿರಸಿ: ಸ್ವರ್ಣವಲ್ಲಿ ಮಹಾ ಸಂಸ್ಥಾನದ ಗಂಗಾಧರೇಂದ್ರ ಸರಸ್ವತೀ ಸ್ವಾಮೀಜಿ ಅವರು ಯಲ್ಲಾಪುರ ತಾಲ್ಲೂಕಿನ ಈರಾಪುರದ (ಗಂಗೆಮನೆ) ವಿದ್ವಾನ್ ನಾಗರಾಜ ಭಟ್ಟ ಅವರನ್ನು ನೂತನ ಶಿಷ್ಯನನ್ನಾಗಿ ಸ್ವೀಕರಿಸಲು ತೀರ್ಮಾನಿಸಿದ್ದು, 2024ರ ಫೆ.22ರಂದು ಶಿಷ್ಯ ಸ್ವೀಕಾರ ಪ್ರಕ್ರಿಯೆ ನಡೆಯಲಿದೆ.



'ಸ್ವಾಮೀಜಿ ಅವರ ಅಪೇಕ್ಷೆ ಮತ್ತು ಸೂಚನೆಯಂತೆ ಹಲವು ವರ್ಷಗಳಿಂದ ಶಿಷ್ಯರ ಹುಡುಕಾಟ ನಡೆದಿತ್ತು. ಸ್ವರ್ಣವಲ್ಲೀ ಮಠದಲ್ಲಿ ಒಂದು ದಶಕದಿಂದ ವೇದಾಧ್ಯಯನ ನಡೆಸಿ, ಇದೀಗ ವೇದಾಂತ ಶಾಸ್ತ್ರ ಅಧ್ಯಯನ ಮಾಡುತ್ತಿರುವ 23 ವರ್ಷದ ನಾಗರಾಜ ಭಟ್ಟ ಅವರ ಕುಂಡಲಿಯನ್ನು ಮೂರು ಪ್ರಮುಖ ಜ್ಯೋತಿಷಿಗಳ ಮೂಲಕ ಪರಿಶೀಲಿಸಿ ಒಪ್ಪಿಗೆ ಪಡೆದು ಈ ಆಯ್ಕೆ ಮಾಡಲಾಗಿದೆ. ನಾಗರಾಜ ಅವರು ಕೃಷಿಕ ಗಣಪತಿ ಭಟ್ಟ ಹಾಗೂ ಭುವನೇಶ್ವರಿ ದಂಪತಿಯ ಮೊದಲ ಪುತ್ರ' ಎಂದು ಮಠದ ಆಡಳಿತ ಮಂಡಳಿ ಅಧ್ಯಕ್ಷ ವಿ.ಎನ್.ಹೆಗಡೆ ಬೊಮ್ಮನಳ್ಳಿ ತಿಳಿಸಿದ್ದಾರೆ.